ಜೆಎಸ್‌ಎಸ್ ಮಹಾವಿದ್ಯಾಪೀಠ

ಜಗದ್ಗುರು ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿ, ಮೈಸೂರು

# ಜ್ಞಾನವಾರಿಧಿ–59

## ಡಿಜಿಟಲ್ ಸಾಪ್ತಾಹಿಕ ಉಪನ್ಯಾಸ ಕಾರ್ಯಕ್ರಮ

17 ಜನವರಿ 2022 * ಸೋಮವಾರ * ಸಂಜೆ 5.00

### ದಿವ್ಯ ಸಾನ್ನಿಧ್ಯ

**ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು**

ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ

ಸುತ್ತೂರು ಶ್ರೀಕ್ಷೇತ್ರ

### ಉಪನ್ಯಾಸ



**ಶ್ರೀ ವೀರೇಶ್ ಗ. ಪಾಟೀಲ್**

ಇತಿಹಾಸ ಉಪನ್ಯಾಸಕರು

ಸರ್ಕಾರಿ ಪದವಿಪೂರ್ವ ಕಾಲೇಜು, ಸದಲಗ, ಚಿಕ್ಕೋಡಿ ತಾ.

**ವಿಷಯ: ನಮ್ಮ ಇತಿಹಾಸ–ನಮ್ಮ ಹೆಮ್ಮೆ**

(ಉಪನ್ಯಾಸದ ನಂತರ ಆನ್‌ಲೈನ್‌ನಲ್ಲಿ ಬರುವ ಪ್ರಶ್ನೆಗಳಲ್ಲಿ ಆಯ್ದವುಗಳಿಗೆ ಉತ್ತರಿಸಲಾಗುವುದು)

LIVE STREAMING

ಆನ್‌ಲೈನ್ ಮೂಲಕ ನೇರವಾಗಿ ವೀಕ್ಷಿಸಲು ಹಾರ್ದಿಕ ಸ್ವಾಗತ

YouTube http://Youtube.com/c/JSSMahavidyapeethaonline

https://www.facebook.com/JSSMVP

**ಜ್ಞಾನವಾರಿಧಿ** ವಿಶೇಷ ಉಪನ್ಯಾಸ ಮಾಲೆ ಕಾರ್ಯಕ್ರಮವನ್ನು 2020ರ ಡಿಸೆಂಬರ್ ತಿಂಗಳಿನಿಂದ ಪ್ರತಿ ಸೋಮವಾರ ಏರ್ಪಡಿಸಿಕೊಂಡು ಬರಲಾಗುತ್ತಿದೆ. ಧರ್ಮ, ಅಧ್ಯಾತ್ಮ, ಯೋಗ, ಕಲೆ, ಸಾಹಿತ್ಯ, ಸಂಸ್ಕೃತಿ, ಆರೋಗ್ಯ, ಜೀವನಶೈಲಿ, ವಿಜ್ಞಾನ, ತಂತ್ರಜ್ಞಾನ ಮುಂತಾದ ವಿಷಯಗಳು ಮತ್ತು ಪ್ರಚಲಿತ ವಿದ್ಯಮಾನಗಳನ್ನು ಕುರಿತು ದೇಶ ಮತ್ತು ವಿದೇಶದ ವಿವಿಧ ಸಂಪನ್ಮೂಲ ವ್ಯಕ್ತಿಗಳಿಂದ ಉಪನ್ಯಾಸಗಳನ್ನು ಆಯೋಜಿಸಲಾಗುತ್ತಿದೆ.

**ಶ್ರೀ ವೀರೇಶ್ ಗದಿಗೆಪ್ಪಗೌಡ ಪಾಟೀಲ್**ರವರು ಹಾವೇರಿ ಜಿಲ್ಲೆ ಹಂದಿಗನೂರಿನಲ್ಲಿ ಜನಿಸಿದರು. ತುಮಕೂರು ತಾಲ್ಲೂಕಿನ ಚಿಕ್ಕತೊಟ್ಲುಕೆರೆ ಅಟವಿಸ್ವಾಮಿ ಮಠದಲ್ಲಿದ್ದುಕೊಂಡು ಪ್ರಾಥಮಿಕ, ಪ್ರೌಢ ಮತ್ತು ಪದವಿಪೂರ್ವ ಶಿಕ್ಷಣವನ್ನು ಪೂರೈಸಿದರು. ತುಮಕೂರಿನ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯಲ್ಲಿ ಶಿಕ್ಷಕ ತರಬೇತಿ, ನವದೆಹಲಿಯ ಇಂದಿರಾ ಗಾಂಧಿ ರಾಷ್ಟ್ರೀಯ ಮುಕ್ತ ವಿಶ್ವವಿದ್ಯಾಲಯದಿಂದ ಬಿಇಡಿ, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದಿಂದ ಇತಿಹಾಸ ವಿಷಯದಲ್ಲಿ ಸ್ನಾತಕೋತ್ತರ ಪದವಿ ಪಡೆದರು.

2007ರಲ್ಲಿ ಸರ್ಕಾರಿ ಶಾಲಾ ಶಿಕ್ಷಕರಾಗಿ ನೇಮಕಗೊಂಡು, ಬೆಳಗಾವಿ ಜಿಲ್ಲೆ ಚಿಕ್ಕೋಡಿ ತಾಲ್ಲೂಕಿನ ನೇಜದಲ್ಲಿ ವೃತ್ತಿ ಆರಂಭಿಸಿದರು. ಶಾಲೆಯ ಪಕ್ಕದಲ್ಲೇ ಗುಡಿಸಲೊಂದರಲ್ಲಿ ವಾಸಮಾಡುತ್ತಾ ಸದೃಢ ಸಮಾಜ ನಿರ್ಮಾಣದ ಹಂಬಲ ಹೊಂದಿ ವಿದ್ಯಾರ್ಥಿಗಳನ್ನು ಉತ್ತಮ ಪ್ರಜೆಗಳನ್ನಾಗಿ ರೂಪಿಸಲು ಶ್ರಮಿಸಿದ್ದಾರೆ. ಸಾಮಾಜಿಕ ಮೌಲ್ಯಗಳ ಅಭಿವೃದ್ಧಿಗಾಗಿ ಪಾಲಕರೊಂದಿಗೆ ಜೊತೆಗೂಡಿ ವ್ಯಸನಮುಕ್ತ ಸಮಾಜ ರೂಪಿಸುವ ಕಾರ್ಯಗಳನ್ನು ಮಾಡುತ್ತಿದ್ದಾರೆ. ಗ್ರಾಮಸ್ಥರ ಸಹಕಾರದಿಂದ ಸಮುದಾಯ ಭವನವೊಂದನ್ನು ನಿರ್ಮಿಸಿ ಪ್ರವಚನ, ಸತ್ಸಂಗ, ಯೋಗ ಶಿಬಿರಗಳು ಹಾಗೂ ಯುವಜನರಿಗೆ ಕಾರ್ಯಾಗಾರಗಳನ್ನು ಏರ್ಪಡಿಸುತ್ತಿದ್ದಾರೆ. ಪ್ರಸ್ತುತ ಸದಲಗದ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ಉಪನ್ಯಾಸಕರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಉತ್ತಮ ವಾಗ್ಮಿಗಳು. ಅನೇಕ ಶಾಲಾ–ಕಾಲೇಜುಗಳು ಹಾಗೂ ಸ್ಪರ್ಧಾತ್ಮಕ ತರಬೇತಿ ಕೇಂದ್ರಗಳಲ್ಲಿ ಉಪನ್ಯಾಸಗಳನ್ನು ನೀಡುತ್ತಿದ್ದಾರೆ. ಇವರ ಸೇವೆಯನ್ನು ಗಮನಿಸಿ ಪಬ್ಲಿಕ್ ಟಿವಿ ಸುದ್ದಿ ವಾಹಿನಿಯು ಇವರ ಕುರಿತಾದ ಕಾರ್ಯಕ್ರಮ ಪ್ರಸಾರ ಮಾಡಿ ಪಬ್ಲಿಕ್ ಹೀರೋ ಎಂದು ಗುರುತಿಸಿ ಗೌರವಿಸಿದೆ.

ಡಾ. ಸ.ಜ. ನಾಗಲೋಟಿಮಠ ಉತ್ತಮ ಶಿಕ್ಷಕ ಪ್ರಶಸ್ತಿ, ವಿವೇಕ ರತ್ನ ಪ್ರಶಸ್ತಿ, ಗುರುಶ್ರೇಷ್ಠ ಪ್ರಶಸ್ತಿ, ಬಿ.ಸಿ. ಗಂಗಾಲ ಉತ್ತಮ ಶಿಕ್ಷಕ ಪ್ರಶಸ್ತಿ, ಸಮಾಜ ಸೇವಾರತ್ನ ಪ್ರಶಸ್ತಿ ಸೇರಿದಂತೆ ಹಲವಾರು ಪ್ರಶಸ್ತಿ ಪುರಸ್ಕಾರಗಳಿಗೆ ಭಾಜನರಾಗಿದ್ದಾರೆ.

**ಜ್ಞಾನವಾರಿಧಿ–60 * 24 ಜನವರಿ 2022**

**ಶ್ರೀ ಕುಮಾರ ವಿರೂಪಾಕ್ಷ ಸ್ವಾಮಿಗಳು**
ಶ್ರೀ ಮೂರುಸಾವಿರ ವಿರಕ್ತಮಠ
ಉಪ್ಪಿನಬೆಟಗೇರಿ, ಧಾರವಾಡ ಜಿ.

ವಿಷಯ : ಬಹಿರಂಗ ಮತ್ತು ಅಂತರಂಗ – ಕೃಷಿ

**ಜ್ಞಾನವಾರಿಧಿ–61 * 31 ಜನವರಿ 2022**

**ಡಾ. ಸಿ.ಜಿ. ಬೆಟಸೂರಮಠ**
ಕಾರ್ಯನಿರ್ವಾಹಕ ಕಾರ್ಯದರ್ಶಿಗಳು
ಜೆಎಸ್ಎಸ್ ಮಹಾವಿದ್ಯಾಪೀಠ, ಮೈಸೂರು

ವಿಷಯ : ಕರ್ತವ್ಯ ನಿಷ್ಠೆ